**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ಎಲ್.ಭೋಜೇಗೌಡ ಹಾಗೂ ಶ್ರೀ ಮಧು ಜಿ.ಮಾದೇಗೌಡ, ಅವರುಗಳಿಂದ ನಿಯಮ 330ರಡಿಯಲ್ಲಿ ಮಂಡಿಸಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ**

**ಸೂಚನಾ ಪತ್ರದ ವಿಷಯ**

7ನೇ ವೇತನ ಆಯೋಗದ ಶಿಫಾರಸ್ಸುಗಳನ್ನು ಜಾರಿಗೊಳಿಸುವಲ್ಲಿ ವಿಳಂಬ ಉಂಟಾಗುತ್ತಿರುವುದರಿಂದ ಸರ್ಕಾರಿ ಹಾಗೂ ಅನುದಾನಿತ ನೌಕರರು ಆರ್ಥಿಕ ಸವಲತ್ತುಗಳಿಂದ ವಂಚಿತರಾಗಿರುವ ಗಂಭೀರ ಸಮಸ್ಯೆ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಸರ್ಕಾರದ ಉತ್ತರ**

ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳನ್ನು ಪರಿಶೀಲಿಸಲು ದಿನಾಂಕ 19-11-2022ರ ಸರ್ಕಾರಿ ಆದೇಶ ಸಂಖ್ಯೆ: ಆಇ 45 ಎಸ್.ಆರ್.ಪಿ 2022ರಲ್ಲಿ ತ್ರಿಸದಸ್ಯರ 7ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶ ಹೊರಡಿಸಲಾಗಿರುತ್ತದೆ. ನಂತರದಲ್ಲಿ, ವೇತನ ಆಯೋಗದ ಅಂತಿಮ ವರದಿಯನ್ನು ಕಾಯ್ದಿರಿಸಿ, ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರುಗಳನ್ನೂ ಒಳಗೊಂಡಂತೆ ರಾಜ್ಯ ಸರ್ಕಾರಿ ನೌಕರರ ಮೂಲ ವೇತನದ ಶೇಕಡ 17ರಷ್ಟು ಮಧ್ಯಂತರ ಪರಿಹಾರವನ್ನು ದಿನಾಂಕ: 01.04.2023ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶ ಹೊರಡಿಸಲಾಗಿರುತ್ತದೆ.

ಸರ್ಕಾರಿ ನೌಕರರ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಸಂಬಂಧ ವೇತನ ಆಯೋಗವು ವಿವಿಧ ಇಲಾಖೆಗಳೊಂದಿಗೆ ಸಮಾಲೋಚಿಸುವ ಅಗತ್ಯತೆಯನ್ನು ಮನಗಂಡ ರಾಜ್ಯ ಸರ್ಕಾರವು ದಿನಾಂಕ: 06.11.2023ರ ಆದೇಶದಲ್ಲಿ ಆಯೋಗದ ಕಾಲಾವಧಿಯನ್ನು ದಿನಾಂಕ: 15.03.2024ರವರೆಗೆ ವಿಸ್ತರಿಸಿ ಆದೇಶ ಹೊರಡಿಸಲಾಗಿರುತ್ತದೆ. ಪ್ರಸ್ತುತ ರಾಜ್ಯ ಸರ್ಕಾರವು ವೇತನ ಆಯೋಗದ ಅಂತಿಮ ವರದಿಯ ನಿರೀಕ್ಷಣೆಯಲ್ಲಿರುತ್ತದೆ.

**ಸಂ: ಆಇ 26 ಎಸ್ಆರ್‌ಪಿ 2023**

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ